# ಕರ್ನಾಟಕ ವಿಧಾನ ಪರಿಷತ್ತು

1] ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 843

2] ಮಾನ್ಯ ಸದಸ್ಯರ ಹೆಸರು : ಶ್ರೀ ಎಂ.ಎಲ್. ಅನಿಲ್ ಕುಮಾರ್ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು)

3] ಉತ್ತರಿಸುವ ದಿನಾಂಕ : 22/02/2024

4] ಉತ್ತರಿಸುವ ಸಚಿವರು : ಗೃಹ ಸಚಿವರು

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಒಂದು ತಾಲ್ಲೂಕಿನಲ್ಲಿ ಅಥವಾ ಹೋಬಳಿಗಳಲ್ಲಿ ಹೊಸ ಪೊಲೀಸ್ ಠಾಣೆಯನ್ನು ತೆರೆಯಲು ಇರುವ ಮಾನದಂಡಗಳೇನು; (ಸಂಪೂರ್ಣವಾದ ಮಾಹಿತಿ ನೀಡುವುದು) | ರಾಷ್ಟ್ರೀಯ ಪೊಲೀಸ್ ಆಯೋಗದ ಶಿಫಾರಸ್ಸಿನನ್ವಯ ಹೊರಡಿಸಲಾದ ಸುತ್ತೋಲೆ ಸಂಖ್ಯೆ: ಆರ್.ಎಲ್.ಎನ್(5)2/2017–18, ದಿನಾಂಕ: 28.12.2017ರಲ್ಲಿ ಹೊಸ ಪೊಲೀಸ್ ಠಾಣೆಯನ್ನು ತೆರೆಯಲು ಇರುವ ಮಾನದಂಡಗಳು ಕೆಳಕಂಡಂತಿರುತ್ತದೆ.<br>1. 75 ಚ.ಮೈಲು/150 ಚ.ಕಿ.ಮೀ.<br>2. 300ಕ್ಕೂ ಹೆಚ್ಚು ಅಪರಾಧ ಪ್ರಕರಣಗಳು (ವಾರ್ಷಿಕ)<br>3. 50,000 ರಿಂದ 60,000 ಜನ ಸಂಖ್ಯೆ<br>ನೂತನ ಪೊಲೀಸ್ ಠಾಣೆಗಳನ್ನು ವ್ಯಾಪ್ತಿ, ಜನಸಂಖ್ಯೆ ಹಾಗೂ ದಾಖಲಾದ ಅಪರಾಧ ಪ್ರಕರಣಗಳ ಆಧಾರದ ಮೇಲೆ ಸೃಜಿಸಲು ಪರಿಗಣಿಸಲಾಗುತ್ತಿದ್ದು, ಕಂದಾಯ ವಿಭಾಗಗಳಾದ ತಾಲ್ಲೂಕು, ಹೋಬಳಿಗಳ ಆಧಾರದ ಮೇಲೆ ಪೊಲೀಸ್ ಠಾಣೆಗಳನ್ನು ಸೃಜಿಸಲಾಗುವುದಿಲ್ಲ. |
| ಆ) | ಕೋಲಾರ ಜಿಲ್ಲೆಯಲ್ಲಿ ಹೊಸ ಪೊಲೀಸ್ ಠಾಣೆಯನ್ನು ತೆರೆಯಲು ಸರ್ಕಾರದ ಮುಂದೆ ಯಾವುದಾದರೂ ಪ್ರಸ್ತಾವನೆಯಿದೆಯೇ; (ಸಂಪೂರ್ಣ ಮಾಹಿತಿ ನೀಡುವುದು) | ನರಸಾಪುರ ಕೈಗಾರಿಕಾ ಪ್ರದೇಶ ಸೇರಿದಂತೆ ಕೋಲಾರ ಜಿಲ್ಲೆಯಲ್ಲಿ ನೂತನ ಪೊಲೀಸ್ ಠಾಣೆ ತೆರೆಯುವ ಕುರಿತು ಯಾವುದೇ ಪ್ರಸ್ತಾವನೆಯು ಪರಿಶೀಲನೆಯಲ್ಲಿರುವುದಿಲ್ಲ. |
| ಇ) | ಕೋಲಾರ ಜಿಲ್ಲೆ ನರಸಾಪುರ ಕೈಗಾರಿಕಾ ಪ್ರದೇಶಗಳಲ್ಲಿ ಸುಮಾರು 15 ಸಾವಿರದಿಂದ 20 ಸಾವಿರ ಜನಗಳ ಓಡಾಟವಿದ್ದು, ಈ ಪ್ರದೇಶಗಳಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡಲು ಪೊಲೀಸ್ ಠಾಣೆಯ ಅಗತ್ಯವಿದ್ದು, ಈ ಜಾಗದಲ್ಲಿ ಪೊಲೀಸ್ ಠಾಣೆಯನ್ನು ತೆರೆಯಲು ಸರ್ಕಾರ ಚಿಂತಿಸಿದೆಯೇ; ಇಲ್ಲದಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಪೊಲೀಸ್ ಠಾಣೆಯನ್ನು ತೆರೆಯಲಾಗುವುದು? (ಸಂಪೂರ್ಣ ಮಾಹಿತಿ ನೀಡುವುದು) | |

**ಸಂಖ್ಯೆ: ಹೆಚ್‌ಡಿ 29 ಪಿಓಪಿ 2024**

(ಡಾ॥ ಜಿ.ಪರಮೇಶ್ವರ)
ಗೃಹ ಸಚಿವರು.